ಆ) ಇಲಾಖೆಗೆ ಅಗತ್ಯ ನಿವೇಶನ ದೊರೆತ ನಂತರ ಅಗತ್ಯ ಅನುದಾನ ಒದಗಿಸಿಕೊಂಡು ಕ್ರೀಡಾಂಗಣ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುವುದು.

ನಗರ ಪ್ರದೇಶದಲ್ಲಿ ಈಜು ಕೊಳಗಳ ಸ್ಥಾಪನೆ

378 (812) ಶ್ರೀ ಅಪ್ಪಾಜಿ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಪ್ರದೇಶದಲ್ಲಿ ಕೆರೆ ಕುಂಟೆಗಳು ಬತ್ತಿ ಹೋಗಿ ಅಲ್ಲಿನ ಯುವಕರಿಗೆ ಈಜು ಕಲಿಯಲು ಇದ್ದ ಅವಕಾಶದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ನಗರ ಪ್ರದೇಶಗಳಲ್ಲಿ ಪ್ರತಿಷ್ಠಿತ ಜನರಿಗೆ ಕಲಿಯಲು ಸುವ್ಯವಸ್ಥಿತ ಈಜು ಕೊಳಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ತಾರತಮ್ಯವನ್ನು ಹೋಗಲಾಡಿಸಲು ಗ್ರಾಮೀಣ ಪ್ರದೇಶದಲ್ಲಿ ಕನಿಷ್ಟ ಪ್ರತಿ ಪಂಚಾಯಿತಿ ಕೇಂದ್ರಗಳಲ್ಲಿ ಈಜು ಕೊಳಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಹಾಗಿದ್ದಲ್ಲಿ, ಈ ಕಾರ್ಯಕ್ರಮವನ್ನು ಅನುಷ್ಟಾನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಜಿ. ಜನಾರ್ಧನರೆಡ್ಡಿ (ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು)

ಅ) ಹೌದು.

ಆ) ಹೌದು.

ಇ) ಹೌದು.

ಈ) ಅನುದಾನ ಹಾಗೂ ಸಿಬ್ಬಂದಿಯ ಲಭ್ಯತೆಯ ಮೇಲೆ ಹಂತ ಹಂತವಾಗಿ ಕ್ರಮ ತೆಗೆದುಕೊಳ್ಳಲಾಗುವುದು.

ಸರ್ಕಾರಿ ನೌಕರರುಗಳಿಗೆ 6ನೇ ವೇತನ ಸಮಿತಿಯ ರಚನೆ

379 (813) ಶ್ರೀ ಅಪ್ಪಾಜಿ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು (ಎ, ಬಿ, ಸಿ ಮತ್ತು ಡಿ ಹುದ್ದೆ ವಿವರ ಒದಗಿಸುವುದು);

ಆ) ಸರ್ಕಾರಿ ನೌಕರರುಗಳಿಗೆ 6ನೇ ವೇತನವನ್ನು ಜಾರಿಗೆ ಮಾಡುವ ಉದ್ದೇಶ ಸರ್ಕಾರದ ಮುಂದೆ ಇದೆಯೇ;

ಇ) ಹಾಗಿದ್ದಲ್ಲಿ, ಎಂದಿನಿಂದ ಜಾರಿಗೊಳಿಸುವುದು;

ಈ) ಆಯೋಗವನ್ನು ರಚಿಸಿದ್ದರೆ ಸಮಿತಿ ಸದಸ್ಯರ ಹೆಸರುಗಳನ್ನು ಒದಗಿಸುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)

ಅ) ರಾಜ್ಯದಲ್ಲಿರುವ ಸರ್ಕಾರಿ ನೌಕರರ ಒಟ್ಟು ಸಂಖ್ಯೆ 5,31,552.

ಈ ಹುದ್ದೆಗಳ ವಿವರ ಕೆಳಕಂಡಂತಿವೆ:

ವರ್ಗ	ಹುದ್ದೆಗಳ ಸಂಖ್ಯೆ
ಎ	14,251
ಬಿ	36,801
ಸಿ	4,22,956
ಡಿ	57,544

ಆ) 2011–12ರ ಆಯವ್ಯಯ ಭಾಷಣದಲ್ಲಿ ವೇತನ ಸಮಿತಿಯನ್ನು ರಚಿಸಲಾಗುವುದು ಎಂದು ಘೋಷಿಸಲಾಗಿದೆ.

ಇ) ವೇತನ ಸಮಿತಿಯು ವರದಿಯನ್ನು ನೀಡಿದ ನಂತರ ಅದರಂತೆ ಕ್ರಮ ಕೈಗೊಳ್ಳಲಾಗುವುದು.

ಈ) ಇನ್ನೂ ರಚಿತವಾಗಿರುವುದಿಲ್ಲ.

ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸುವುದು

380 (4)21 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2010–11ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಗೆ ಎಷ್ಟು ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲಾಗಿದೆ (ತಾಲ್ಲೂಕುವಾರು ವಿವರಗಳನ್ನು ನೀಡುವುದು);